All India Radio: Bangalore
Regional Bulletin In Kannada
08.12.2025 / 6.40 p.m.
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಅನಗತ್ಯವಾಗಿ ಸಿಸೇರಿಯನ್ ಮಾಡುವ ಖಾಸಗಿ ಆಸ್ಪತ್ರೆಗಳ ವಿರುದ್ಧ ಕಠಿಣಕ್ರಮ - ಆರೋಗ್ಯ ಸಚಿವ ದಿನೇಶ್ ಗುಂಡೂರಾವ್
- ೯೦೦ ಸರ್ಕಾರಿ ಶಾಲೆಗಳನ್ನು ಕೆಪಿಎಸ್ ಶಾಲೆಗಳನ್ನಾಗಿ ಉನ್ನತೀಕರಣಗೊಳಿಸಿದ ಸರ್ಕಾರ
- ಸುವರ್ಣ ಸೌಧದ ಆವರಣದಲ್ಲಿ ಸಾಲು ಮರದ ತಿಮ್ಮಕ್ಕ ಗೌರವಾರ್ಥ ಸದಸ್ಯರಿಂದ ಗಿಡ ನೆಡಿಸಲು ಸಭಾಧ್ಯಕ್ಷ ಯು.ಟಿ.ಖಾದರ್ ನಿರ್ಧಾರ
- ಮೇಕೆದಾಟು ಯೋಜನೆ; ರಾಜ್ಯ ಸರ್ಕಾರದ ವಿರುದ್ಧ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅಸಮಾಧಾನ

***************

ರಾಜ್ಯದಲ್ಲಿ ಹಣ ವಸೂಲಿಗಾಗಿ ಅನಗತ್ಯವಾಗಿ ಸಿಸೇರಿಯನ್ ಹೆರಿಗೆ ಮಾಡುವ ಖಾಸಗಿ ಆಸ್ಪತ್ರೆಗಳ ವಿರುದ್ಧ  ಕೆ.ಪಿ.ಎಂ.ಇ. ಅಧಿನಿಯಮದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಪರಿಷತ್‌ನಲ್ಲಿಂದು ಸದಸ್ಯ ಗೋವಿಂದ ರಾಜು ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ದೂರುಗಳು ಬಂದಲ್ಲಿ ನಿಯಮ ಉಲ್ಲಂಘಿಸಿದ ಖಾಸಗಿ ಆಸ್ಪತ್ರೆಯ ವಿರುದ್ಧ ಕೆ ಪಿ ಎಂ ಇ ಅಧಿನಿಯಮದ ಸೆಕ್ಷನ್ ೧೫ ಉಪಬಂಧ ಒಂದರನ್ವಯ ಕ್ರಮ ಜರುಗಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

***************

ಶಸ್ತ್ರಚಿಕಿತ್ಸೆಯ ವೇಳೆಯಲ್ಲಿ ಬಿಮ್ಸ್ ವೈದ್ಯರಿಂದ ಯಾವುದೇ ನಿರ್ಲಕ್ಷ್ಯ ಸಂಭವಿಸಿಲ್ಲ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ.

ಮೇಲ್ಮನೆಯ ಪ್ರಶ್ನೋತ್ತರ ವೇಳೆಯಲ್ಲಿ, ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಪ್ರಕರಣದ ಚರ್ಚೆಯ ವೇಳೆ ತಪ್ಪಿತಸ್ಥ ವೈದ್ಯರು ಮತ್ತು ಆಡಳಿತ ಮಂಡಳಿ ವಿರುದ್ಧ ಕ್ರಮಕೈಗೊಳ್ಳಬೇಕು ಎಂದು ಸದಸ್ಯ ಎಂ.ನಾಗರಾಜು ಪಟ್ಟುಹಿಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಬಿಮ್ಸ್ ಸಂಸ್ಥೆಯಲ್ಲಿ ಶಸ್ತ್ರಚಿಕಿತ್ಸೆಯ ವೇಳೆಯಲ್ಲಿ ವೈದ್ಯರಿಂದ ಯಾವುದೇ ನಿರ್ಲಕ್ಷ್ಯ ಆಗಿಲ್ಲ ಎಂದು  ಸ್ಪಷ್ಟನೆ ನೀಡಿದ್ದಾರೆ.

***************

ಪ್ರಸಕ್ತ ಸಾಲಿನಲ್ಲಿ ೯೦೦ ಸರ್ಕಾರಿ ಶಾಲೆಗಳನ್ನು ಕೆ.ಪಿ.ಎಸ್. ಶಾಲೆಗಳನ್ನಾಗಿ ಉನ್ನತೀಕರಿಸಲಾಗುತ್ತಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಪರಿಷತನಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಚಿದಾನಂದ್ ಎಂ ಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ಮುಂದಿನ ದಿನಗಳಲ್ಲಿ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಒಂದು ಕೆ.ಪಿ.ಎಸ್. ಶಾಲೆಯನ್ನು ಹಂತ ಹಂತವಾಗಿ ಪ್ರಾರಂಭಿಸಲು ಕ್ರಮವಹಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

ಕನ್ನಡ ಮಾಧ್ಯಮದ ಯಾವುದೇ ಶಾಲೆಗಳನ್ನು ಮುಚ್ಚುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

***************

ಬ್ಯಾಕ್ಟಿರೀಯಾ ಸೋಂಕು ಗಳಲೆ ರೋಗದಿಂದ ರಾಣಿ ಚೆನ್ನಮ್ಮ ಕಿರು ಮೃಗಾಲಯದಲ್ಲಿ ೩೧ ಕೃಷ್ಣಮೃಗಗಳು ಸಾವನ್ನಪ್ಪಿದೆ ಎಂದು ಅರಣ್ಯ, ಸಚಿವ ಈಶ್ವರ ಬಿ ಖಂಡ್ರೆ ಪರಿಷತ್‌ನಲ್ಲಿ ಸ್ಪಷ್ಟಪಡಿಸಿದ್ದಾರೆ.

ವಿಧಾನಪರಿಷತ್ತಿನಲ್ಲಿಂದು ಸದಸ್ಯರ ಪ್ರಶ್ನೆಗೆ ಉತ್ತರಿಸಿದ ಅವರು, ಚಿಗುರು ತಿನ್ನುವ ಪ್ರಾಣಿಗಳಲ್ಲಿ ಸಾಮಾನ್ಯವಾಗಿ ಈ ಕಾಯಿಲೆ ಕಾಣಿಸಿಕೊಳ್ಳುತ್ತದೆ. ಹೊರ ನೋಟಕ್ಕೆ ಸೋಂಕಿನ ಲಕ್ಷಣವೂ ಕಾಣುವುದಿಲ್ಲ. ಈ ಸೋಂಕು ಬಂದ ೬ ರಿಂದ ೨೪ ಗಂಟೆಗಳಲ್ಲಿ ಅಥವಾ ೮ರಿಂದ ೨೪ ಗಂಟೆಗಳಲ್ಲಿ ಸಾವು ಸಂಭವಿಸುತ್ತದೆ ಎಂದು ವೈದ್ಯರು ತಿಳಿಸಿದ್ದಾರೆ.

ಸೋಂಕು ತಗುಲಿದ ಕೆಲವೇ ಗಂಟೆಗಳಲ್ಲಿ ಸಾವು ಸಂಭವಿಸುವ ಕಾರಣ ಹೆಚ್ಚಿನ ಸಂಖ್ಯೆಯಲ್ಲಿ ಕೃಷ್ಣಮೃಗ ಮೃತಪಟ್ಟಿದೆ ಎಂಬುದು ತಜ್ಞ ವೈದ್ಯರ ಅಭಿಪ್ರಾಯವಾಗಿದೆ ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ.

ರಾಜ್ಯದ ಮೃಗಾಲಯಗಳಲ್ಲಿ ವನ್ಯಜೀವಿಗಳ ಸಂರಕ್ಷಣೆಗೆ ಸರ್ಕಾರ ಎಲ್ಲ ಅಗತ್ಯ ಕ್ರಮ ಕೈಗೊಂಡಿದೆ ಎಂದು ಸ್ಪಷ್ಟನೆ ನೀಡಿದ್ದಾರೆ.

***************

ವಿಧಾನಸಭೆ ಕಲಾಪ ಆರಂಭಗೊಳ್ಳುತ್ತಿದ್ದಂತೆಯೇ ಇಂದು ಅಗಲಿದ ಗಣ್ಯರಿಗೆ ಸಂತಾಪ ಸೂಚಿಸಲಾಯಿತು.

ಮಾಜಿ ಸಚಿವ ಹಾಗೂ ವಿಧಾನಸಭೆಯ ಹಾಲಿ ಶಾಸಕ ಎಮ್,ವೈ,ಮೇಟಿ, ಮಾಜಿ ಶಾಸಕರಾದ ಆರ್.ವಿ.ದೇವರಾಜ್, ಶಿವಶರಣಪ್ಪಗೌಡ ಪಾಟೀಲ್, ವೃಕ್ಷಮಾತೆ ಪದ್ಮಶ್ರೀ ಸಾಲುಮರದ ತಿಮ್ಮಕ್ಕ, ಸರಸ್ವತಿ ಸಮ್ಮಾನ ಪ್ರಶಸ್ತಿ ವಿಜೇತ ಹಿರಿಯ ಸಾಹಿತಿ ಎಸ್.ಎಲ್. ಬೈರಪ್ಪ, ಕನ್ನಡ ಚಲನಚಿತ್ರರಂಗದ ಹೆಸರಾಂತ ಹಿರಿಯ ನಟ ಎಂ.ಎಸ್. ಉಮೇಶ್ ಅವರ ನಿಧನಕ್ಕೆ ಸದನದಲ್ಲಿ ಸಂತಾಪ ಸೂಚಿಸಲಾಯಿತು.

ಸಭಾಧ್ಯಕ್ಷ ಯು.ಟಿ.ಖಾದರ್ ಮಾತನಾಡಿ, ವೃಕ್ಷಮಾತೆ ಸಾಲುಮರದ ತಿಮ್ಮಕ್ಕ ಅವರ ಗೌರವಾರ್ಥ ಅವರ ಹೆಸರನ್ನು ಚಿರಸ್ಥಾಯಿಯಾಗಿ ಮಾಡಲು ಬೆಳಗಾವಿಯ ಸುವರ್ಣಸೌಧದ ಆವರಣದ ಖಾಲಿಜಾಗದಲ್ಲಿ ಪ್ರತಿಯೊಬ್ಬ ಸದಸ್ಯರಿಂದ ಒಂದೊಂದು ಗಿಡ ನೆಡುವ ಮೂಲಕ ಸಾಲುಮರದ ತಿಮ್ಮಕ್ಕ ಅವರಿಗೆ ಗೌರವ ಸಲ್ಲಿಸಲಾಗುವುದು ಎಂದು ತಿಳಿಸಿದ್ದಾರೆ.

ಅಗಲಿದ ಗಣ್ಯರಿಗೆ ಗೌರವ ಸಲ್ಲಿಸಿದ ನಂತರ ಸಭಾಧ್ಯಕ್ಷ ಯು.ಟಿ.ಖಾದರ್ ಸದನ ಕಲಾಪವನ್ನು ನಾಳೆಗೆ ಮುಂದೂಡಿದರು.

***************

ಮೇಕೆದಾಟು ಯೋಜನೆ ಕುರಿತಂತೆ ರಾಜ್ಯ ಸರ್ಕಾರ ಜನರನ್ನು ದಾರಿ ತಪ್ಪಿಸುತ್ತಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರ ಸ್ವಾಮಿ ಆರೋಪಿಸಿದ್ದಾರೆ.

ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಜಲ ಆಯೋಗದ ಮುಂದೆ ಪ್ರಕರಣವನ್ನು ಮಂಡಿಸಲು ಸರ್ವೋಚ್ಚ ನ್ಯಾಯಾಲಯ ರಾಜ್ಯವನ್ನು ಕೇಳಿದೆ. ಹೀಗಿರುವಾಗ ತಮಿಳುನಾಡು ಜೊತೆ ರಾಜ್ಯ ಸರ್ಕಾರ ಏಕೆ ಮಾತುಕತೆ ನಡೆಸಬಾರದು ಎಂದು ಪ್ರಶ್ನಿಸಿದ್ದಾರೆ.

ಯೋಜನೆ ಜಾರಿಯಾದರೆ ಮೇಕೆದಾಟು ಪ್ರದೇಶದಲ್ಲಿ ಸುಮಾರು ೧೨ ಸಾವಿರ ಎಕರೆ ಅರಣ್ಯ ಭೂಮಿ ಮುಳುಗಿ ಪರಿಸರ ನಾಶವಾಗಲಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ಇದೇ ವೇಳೆ, ಶಾಲೆಗಳಲ್ಲಿ ಭಗವದ್ಗೀತೆ ಬೋಧಿಸುವ ಕುರಿತಂತೆ ನೀಡಿದ್ದ ಹೇಳಿಕೆಯನ್ನು ಕುಮಾರಸ್ವಾಮಿ ಸಮರ್ಥಿಸಿಕೊಂಡಿದ್ದಾರೆ.

ಯುವಜನರಲ್ಲಿ ಹೆಚ್ಚುತ್ತಿರುವ ಮಾದಕ ದ್ರವ್ಯ ಸೇವನೆಯನ್ನು ಉಲ್ಲೇಖಿಸಿ ಪಠ್ಯಗಳಲ್ಲಿ ಭಗವದ್ಗೀತೆ ಬೋಧಿಸುವಂತೆ ಸಲಹೆ ನೀಡಿರುವುದಾಗಿ ತಿಳಿಸಿದ್ದಾರೆ.

***************

ಬೆಳಗಾವಿಯಲ್ಲಿರುವ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ರಜತ ಮಹೋತ್ಸವದ ಭವನದಲ್ಲಿ "ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ೨೦೨೫ ಸಾಫ್ಟ್‌ವೇರ್ ಎಡಿಷನ್ ಗ್ರ್ಯಾಂಡ್ ಫಿನಾಲೆಗೆ ಚಾಲನೆ ದೊರೆತಿದೆ.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ರೇಣುಕಾ ಶುಗರ್ಸ್ ಪ್ರೈವೆಟ್ ಲಿಮಿಟೆಡ್ ಉಪಾಧ್ಯಕ್ಷ ಡಾ. ಗೋವಿಂದ ಮಿಸಾಲೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಶುದ್ಧ ಮತ್ತು ಹಸಿರು ತಂತ್ರಜ್ಞಾನವೇ ಇಂದಿನ ಅವಶ್ಯಕತೆಯಾಗಿದೆ. ಎಐಸಿಟಿಇ ಮತ್ತು ಎಸ್‌ಐಎಚ್‌ಗಳು ವಾಯು ಮಾಲಿನ್ಯ, ಶುದ್ಧ ಇಂಧನ ಮತ್ತು ಪರಿಸರ ಶಾಶ್ವತತೆ ಕುರಿತ ಪರಿಣಾಮಕಾರಿಯಾದ ಪರಿಹಾರಗಳನ್ನು ಕಂಡುಹಿಡಿಯುವಂತೆ" ಸೂಚಿಸಿದರು.

"ವಿಶ್ವವಿದ್ಯಾಲಯದ ಕುಲಪತಿ ಡಾ.ಎಸ್. ವಿದ್ಯಾಶಂಕರ್ ಮಾತನಾಡಿ, "ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ಕೇವಲ ಒಂದು ಕಾರ್ಯಕ್ರಮವಲ್ಲ. ಇದೊಂದು ವಿದ್ಯಾರ್ಥಿಗಳು ತಮ್ಮ ಪ್ರತಿಭೆಗಳನ್ನು ತೋರಲು ಇರುವ ವೇದಿಕೆಯಾಗಿದೆ ಎಂದು ತಿಳಿಸಿದ್ದಾರೆ.

***************

ಉದ್ಯೋಗಸ್ಥ ಮಹಿಳೆಯರಿಗೆ ಅನುಕೂಲವಾಗುವಂತೆ ಜಿಲ್ಲೆಯಲ್ಲಿರುವ ಪಡಿತರ ನ್ಯಾಯಬೆಲೆ ಅಂಗಡಿಗಳನ್ನು ರಾತ್ರಿ ೮ ಗಂಟೆಯವರೆಗೂ ತೆರೆಯಬೇಕೆಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕಿ ಸೌಮ್ಯ ಅವರಿಗೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸೂಚನೆ ನೀಡಿದ್ದಾರೆ.

ಗುಬ್ಬಿ ತಾಲ್ಲೂಕಿನಲ್ಲಿ ಆಹಾರ ಅದಾಲತ್ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಉದ್ಯೋಗಸ್ಥ ಮಹಿಳೆಯರು ಸಂಜೆ ೬ ಗಂಟೆಯೊಳಗೆ ಪಡಿತರ ಧಾನ್ಯವನ್ನು ಪಡೆಯಲು ಅನಾನುಕೂಲವಾಗುತ್ತಿರುವ ಹಿನ್ನೆಲೆಯಲ್ಲಿ ನ್ಯಾಯಬೆಲೆ ಅಂಗಡಿಗಳನ್ನು ರಾತ್ರಿ ೮ ಗಂಟೆಯವರೆಗೂ ತೆರೆಯುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಅನ್ನ ಸುವಿಧ' ಯೋಜನೆಗೆ ಅರ್ಹ ಫಲಾನುಭವಿಗಳು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು ಎಂದು ಅವರು ಸೂಚಿಸಿದ್ದಾರೆ.

***************

ಮಂಡ್ಯ ಜಿಲ್ಲೆಯಲ್ಲಿ ನಕಲಿ ಜನನ ಮತ್ತು ಮರಣ ಪತ್ರ ನೀಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಸೂಚಿಸಿದ್ದಾರೆ.

ಜಿಲ್ಲಾ ಮಟ್ಟದ ಜನನ ಮತ್ತು ಮರಣ ಸಮನ್ವಯ ಸಮಿತಿ ಸಭೆ ಹಾಗೂ ಜಿಲ್ಲಾ ಮಟ್ಟದ ಬೆಳೆ ಕಟಾವು ಪ್ರಯೋಗ ಹಾಗೂ ಕೃಷಿ ಅಂಕಿ ಅಂಶ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು,

ಜನನ ಮತ್ತು ಮರಣವನ್ನು ನೊಂದಣಿ ಮಾಡಲು ಗ್ರಾಮ ಪಂಚಾಯಿತಿಯ ಕಾರ್ಯದರ್ಶಿಗಳಿಗೆ ಅಧಿಕಾರ ನೀಡಲಾಗಿದೆ.

ಜನನ ಹಾಗೂ ಮರಣ ಸಂಭವಿಸಿದ ೩೦ ದಿನಗಳೊಳಗಾಗಿ ಜನನ ಮತ್ತು ಮರಣ ಪತ್ರ ಮಾಡಿಸಿಕೊಳತಕ್ಕದ್ದು. ಇಲ್ಲವಾದಲ್ಲಿ ೩೦ ದಿನಗಳು ಮೀರಿದರೆ ತಹಶೀಲ್ದಾರ್ ಬಳಿ ತೆರಳಬೇಕು. ೧ ವರ್ಷ ಮೀರಿದರೆ ನ್ಯಾಯಾಲದ ಮೂಲಕ ಜನನ ಮತ್ತು ಮರಣ ಪ್ರಮಾಣ ಪತ್ರ ಪಡೆಯಬೇಕಾಗುತ್ತದೆ ಎಂದು ಮಾಹಿತಿ ನೀಡಿದ್ದಾರೆ.

***************

ಸರ್ಕಾರ ನೀಡುವ ಆಹಾರಧಾನ್ಯವನ್ನು ಕಾಳಸಂತೆಯಲ್ಲಿ ಮಾರಾಟ ಮಾಡಿದ್ದಲ್ಲಿ ನಿರ್ದಾಕ್ಷಿಣ್ಯವಾಗಿ ಕ್ರಮಕೈಗೊಳ್ಳಲಾಗುವುದೆಂದು ಬಾಗಲಕೋಟೆ ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ.

***************

ವಿನಾಶದ ಅಂಚಿನಲ್ಲಿರುವ ಪ್ರಾಣಿಗಳ ಸಂರಕ್ಷಣೆ ನಮ್ಮೆಲ್ಲರ ಕರ್ತವ್ಯ ಎಂದು ಬೆಂಗಳೂರಿನ ಉಚ್ಚ ನ್ಯಾಯಾಲಯದ ನ್ಯಾಯಾಧೀಶರಾದ ಆರ್ ನಟರಾಜ್ ಕರೆ ನೀಡಿದ್ದಾರೆ.

ಹೊಸಪೇಟೆ ತಾಲೂಕು ಕಮಲಾಪುರ ಸಮೀಪದ ದರೋಜಿ ಕರಡಿ ಧಾಮದಲ್ಲಿ ಆಯೋಜಿಸಲಾಗಿದ್ದ ಮಾನವ ಮತ್ತು ವನ್ಯಜೀವಿ ಸಂಘರ್ಷ ಕುರಿತ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

***************

ಶಬರಿಮಲೆ ಋತುವಿನಲ್ಲಿ ಹಾಗೂ ಮುಂಬರುವ ಪೊಂಗಲ್ ಹಬ್ಬದ ಸಮಯದಲ್ಲಿ ಭಕ್ತರಿಂದ ಹೆಚ್ಚಿನ ಪ್ರಯಾಣದ ಬೇಡಿಕೆ ಗಮನದಲ್ಲಿಟ್ಟುಕೊಂಡು ಕೆಲವು ವಾರಕ್ಕೊಮ್ಮೆ ಸಂಚರಿಸುವ ವಿಶೇಷ ರೈಲು ಸೇವೆಗಳನ್ನು ವಿಸ್ತರಿಸಲು ನೈಋತ್ಯ ರೈಲ್ವೆ ನಿರ್ಧರಿಸಿದೆ.

*******ಮುಕ್ತಾಯ*******